# ಕರ್ನಾಟಕ ವಿಧಾನ ಪರಿಷತ್

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **415 (448)** |
| **ಸದಸ್ಯರ ಹೆಸರು** | ಶ್ರೀ ಎಂ ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | **19.07.2024** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಹಲವು ಜಿಲ್ಲೆಗಳಲ್ಲಿ ವಿಶೇಷವಾಗಿ ತುಮಕೂರು, ಚಿತ್ರದುರ್ಗ, ಹಾಸನ, ಬಳ್ಳಾರಿ ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಹಾವೇರಿ ಜಿಲ್ಲೆಗಳಲ್ಲಿ ಇರುವ ಗೊಲ್ಲರಹಟ್ಟಿಗಳಲ್ಲಿ ವಾಸಿಸುವ ನಾಗರೀಕರಿಗೆ ಮೂಲಭೂತ ಸೌಕರ್ಯಗಳು ಇಲ್ಲದೇ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆಲವೊಂದು ಗೊಲ್ಲರಹಟ್ಟಿಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುತ್ತದೆ.<br>ಗೊಲ್ಲರಹಟ್ಟಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆ ಹಾಗೂ ಲೆಕ್ಕ ಶೀರ್ಷಿಕೆಗಳಡಿ ರಸ್ತೆ - ಚರಂಡಿ, ಕುಡಿಯುವ ನೀರು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಗೊಲ್ಲರಹಟ್ಟಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯ ಯೋಜನೆಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು) | |
| ಇ | ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮವಾಗಿ ಪರಿವರ್ತಿಸಲಾಗುವುದೇ? (ವಿವರ ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 94 (ಡಿ) ಹಾಗೂ ನಿಯಮಗಳು 1966 ರನ್ವಯ ಮತ್ತು ಕರ್ನಾಟಕ ಭೂ ಸುಧಾರಣಾ ಕಾಯಿದೆ 1961 ರ ಕಲಂ 38 (ಎ) ಹಾಗೂ ನಿಯಮಗಳು 1974ರ ಅನ್ವಯ ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ20 ಸಿಸಿಆರ್ ವಿ 2019, ದಿನಾಂಕ: 15.10.2019 ಮತ್ತು ಸರ್ಕಾರದ ಆದೇಶ ಸಂಖ್ಯೆ:ಕಂಇ01:ಭೂದಾವ:2016, ಬೆಂಗಳೂರು, ದಿನಾಂಕ: 01.03.2016 ರನ್ವಯ ಮತ್ತು ಸರ್ಕಾರದ ಸುತ್ತೋಲೆಗಳಲ್ಲಿನ ನಿರ್ದೇಶದನ್ವಯ ಅರ್ಹ ದಾಖಲೆರಹಿತ ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು. |

**ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಇ/ಚುರಪ್ರ-448/2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು